



ಅರುಣ ಪಿ. ಭಟ್ಟ

## ವಾರಭವಿಷ್ಯ: 28.03.2024ರಿಂದ 03.04.2024ರವರೆಗೆ




ಸಾಹಿತ್ಯ ಕ್ಷೇತ್ರದಲ್ಲಿ ಇರುವವರಿಗೆ ಉತ್ತಮವಾದ ಪ್ರಗತಿ. ನಿಮ್ಮೊಳಗಿನ ತಾಜಾತನವನ್ನು ಹಾಗೇ ಉಳಿಸಿಕೊಳ್ಳಲು ನೆರವಾಗುತ್ತದೆ. ಆದಾಯ ಮೂಲದಿಂದ ಹೆಚ್ಚುವರಿಯಾಗಿ ಅನುಕೂಲ ಪಡೆಯಲಿದ್ದೀರಿ. ವೈಯಕ್ತಿಕ ಸಂಬಂಧಗಳು ಸುಮಧುರವಾಗಿ ಇರುತ್ತವೆ. ಇದರಿಂದ ನಿಮ್ಮ ಸಂತೋಷ ಹೆಚ್ಚಾಗಲಿದೆ. ಖರ್ಚು ವೆಚ್ಚಗಳು ಹೆಚ್ಚಾಗಿ ಚಿಂತೆಗೆ ಕಾರಣ ಆಗಲಿದೆ. ಶುಭದಿನ 29. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ಕೌಟುಂಬಿಕ ವಿಚಾರಗಳಲ್ಲಿ ಉತ್ತಮ ಬೆಳವಣಿಗೆ ಕಾಣಲಿದ್ದೀರಿ. ಮಾರಾಟ ವಿಭಾಗದಲ್ಲಿ ಕೆಲಸ ನಿರ್ವಹಿಸುವವರು ಗುರಿ ಮುಟ್ಟುವಲ್ಲಿ ಸಫಲರಾಗುತ್ತೀರಿ. ಆರೋಗ್ಯ ಉತ್ತಮವಾಗಿ ಇರುತ್ತದೆ. ಬಂಡವಾಳ ಹೂಡಿಕೆಗೆ ಹಲವು ಅವಕಾಶಗಳನ್ನು ಪರಿಶೀಲಿಸಿ, ಅಂತಿಮವಾಗಿ ಅತ್ಯುತ್ತಮವಾದದ್ದನ್ನು ಆರಿಸಿಕೊಳ್ಳುವಲ್ಲಿ ನೀವು ಯಶಸ್ಸು ಪಡೆಯುತ್ತೀರಿ. ಶುಭದಿನ 30. ಶ್ರೀ ಲಕ್ಷ್ಮೀನರಸಿಂಹ ಪಂಚರತ್ನ ಸ್ತೋತ್ರ ಪಠಿಸಿರಿ.




ನೀವು ನಂಬಿದ ವಿಚಾರಗಳನ್ನು ಪ್ರಸ್ತುತಪಡಿಸುವುದಕ್ಕೆ ಬಹಳ ಶ್ರಮ ಪಡುತ್ತೀರಿ. ಸ್ನೇಹಿತರು ಸಾಲ ಕೇಳಿದರು ಎಂದು ತಕ್ಷಣ ನೀಡಿದರೆ ವಾಪಸ್ ಬರುವುದು ಕಷ್ಟ. ಕಾನೂನು ವಿಚಾರಗಳು ನಿಮ್ಮ ವಿರುದ್ಧ ಸಾಗುತ್ತವೆ. ಬೇರೊಬ್ಬರು ನೀಡಿದ ವಸ್ತು, ದಾಖಲೆ ಪತ್ರಗಳನ್ನು ನೀವು ಕಳೆದುಕೊಳ್ಳಬಹುದು. ವಾಹನ ಚಾಲನೆ ಮಾಡುವಾಗ ಎಚ್ಚರ. ಶುಭದಿನ 03. ಗಣೇಶ ಪಂಚರತ್ನ ಸ್ತೋತ್ರ ಪಠಣ ಮಾಡಿರಿ.




ಒಂದೇ ಸಲಕ್ಕೆ ಹಲವು ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರುತ್ತವೆ. ಯಾವುದನ್ನು ಆಯ್ಕೆ ಮಾಡಿಕೊಳ್ಳಬೇಕು ಎಂಬ ಬಗ್ಗೆ ಸ್ಪಷ್ಟತೆ ಇರಲಿ. ವೈಯಕ್ತಿಕ ಸಂಬಂಧದಲ್ಲಿ ಬಹಳ ಹುಷಾರಾಗಿರಬೇಕು. ಕೋರ್ಟ್ ಪ್ರಕರಣ ನಡೆಯುತ್ತಿದ್ದರೆ ಆ ಕಡೆ ಹೆಚ್ಚಿನ ಗಮನ ನೀಡಬೇಕು. ಮಕ್ಕಳಿಗೆ ಬೆಲೆ ಬಾಳುವ ಉಡುಗೊರೆ ನೀಡುವ ಬಗ್ಗೆ ಆಲೋಚನೆ ಮಾಡುತ್ತೀರಿ. ಶುಭದಿನ 02. ಕಾಲಭೈರವಾಷ್ಟಕ ಸ್ತೋತ್ರ ಪಠಿಸಿರಿ.




ವಾರದ ಶುರುವಿನಿಂದಲೇ ಅಂದುಕೊಂಡ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಕೆಲಸ–ಕಾರ್ಯಗಳಲ್ಲಿ ಆಗುತ್ತಿರುವ ಪ್ರಗತಿ ಬಗ್ಗೆ ತೃಪ್ತಿ ಮೂಡುತ್ತದೆ. ಆ ಮೂಲಕ ಅವರ ಮೆಚ್ಚುಗೆಯನ್ನು ಪಡೆಯುತ್ತೀರಿ. ಪರಿಣಾಮಕಾರಿಯಾದ ಕಾರ್ಯ ವೈಖರಿಯನ್ನು ಮೆಚ್ಚಿಕೊಳ್ಳುತ್ತಾರೆ. ಉದ್ಯೋಗದಲ್ಲಿ ಹೆಮ್ಮೆ ಪಡುವಂಥ ಸನ್ನಿವೇಶ. ಶುಭದಿನ 01. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಪುಣ್ಯಕ್ಷೇತ್ರ ದರ್ಶನಕ್ಕೆ ತೆರಳುವ ಸಾಧ್ಯತೆ. ಅಗತ್ಯಕ್ಕೆ ತಕ್ಕಂತೆ ಈ ವಾರ ಕೆಲ ನಿಯಮಗಳನ್ನು ಅಳವಡಿಸಿಕೊಳ್ಳಲಿದ್ದೀರಿ. ಇದರಿಂದ ಮಾರುಕಟ್ಟೆಯ ಹಿಡಿತ ಸಾಧಿಸಲು ಸಾಧ್ಯವಾಗುತ್ತದೆ. ಕೆಲವು ಕೆಲಸಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ನಿಮ್ಮ ಸೋದರರು ಸಹಾಯಕ್ಕೆ ನಿಲ್ಲುತ್ತಾರೆ. ಅದಕ್ಕಾಗಿ ಅವರಿಗೆ ಗೌರವ ಹಾಗೂ ಅಧಿಕಾರ ನೀಡುತ್ತೀರಿ. ಮನೆಯಲ್ಲಿ ಸಂತಸದ ವಾತಾವರಣ ಇರುತ್ತದೆ. ಶುಭದಿನ 02. ಆದಿತ್ಯ ಹೃದಯ ಪಠಿಸಿರಿ.




ಕುಟುಂಬ ಸದಸ್ಯರ ಜೊತೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಕುಟುಂಬದ ಸದಸ್ಯರಿಗೆ ಕೆಲವು ಕೆಲಸಗಳನ್ನು ವಹಿಸುತ್ತೀರಿ. ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಕಾನೂನಿಗೆ ಸಂಬಂಧಿಸಿದ ವಿಚಾರಗಳಲ್ಲಿ ತೊಡಗಿಕೊಳ್ಳಬೇಕಾದ ಅಗತ್ಯ ಕಂಡುಬರುತ್ತದೆ. ನಿಮ್ಮ ಸಂಸ್ಥೆಯ ಸಾಮರ್ಥ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕೆಲವು ಸೂತ್ರಗಳನ್ನು ರೂಪಿಸಲಿದ್ದೀರಿ. ಶುಭದಿನ 31. ಚಂಡಿ ಪಾರಾಯಣ ಮಾಡಿರಿ.




ವಾರದ ಮೊದಲ ಭಾಗದಲ್ಲಿ ಅತಿ ಮುಖ್ಯವಾದ ಕೆಲಸಗಳನ್ನು ಮುಗಿಸಿಕೊಳ್ಳಿ. ಗುಣಮಟ್ಟದ ನಿರ್ಧಾರ ಹಾಗೂ ಆಲೋಚನೆಗಳಿಂದ ಮೆಚ್ಚುಗೆಗೆ ಪಾತ್ರರಾಗುತ್ತೀರಿ. ನಿಮ್ಮ ಸಾಮರ್ಥ್ಯ ಕಂಡು ಇತರರು ಬೆರಗಾಗುತ್ತಾರೆ. ಸಾರ್ವಜನಿಕ ಮನ್ನಣೆ ದೊರೆಯುವ ಅವಕಾಶಗಳು ನಿಚ್ಚಳವಾಗಿವೆ. ಹೊಸ ಕೆಲಸಕ್ಕೆ ಪ್ರಯತ್ನ ಮಾಡುತ್ತಿರುವವರು ಶ್ರಮವನ್ನು ಹೆಚ್ಚಿಸಬೇಕು. ಶುಭದಿನ 02. ಲಕ್ಷ್ಮೀನರಸಿಂಹ ಸ್ತೋತ್ರ ಪಠಿಸಿರಿ.




ಗ್ರಹಗತಿಗಳು ನಿಮ್ಮ ಕಡೆಗೆ ಶುಭ ದೃಷ್ಟಿ ಬೀರುತ್ತಿವೆ. ಬಾಕಿ ಇರುವ ನಿಮ್ಮ ಹಲವು ಕೆಲಸಗಳಿಗೆ ಈ ವಾರ ಪರಿಹಾರ ಸಿಗಲಿದೆ. ವೈಯಕ್ತಿಕ ಸಂಗತಿಗಳಲ್ಲಿ ನಿಮ್ಮ ಪಾಲಿಗೆ ಯಶಸ್ಸು ದೊರೆಯಲಿದೆ. ಸಂದರ್ಶನಗಳಲ್ಲಿ ಯಶ ಸಾಧಿಸುತ್ತೀರಿ. ತುಂಬ ಮುಖ್ಯವಾದ ಚರ್ಚೆ ಕೂಡ ನಡೆಸುವ ಸಾಧ್ಯತೆ ಇದೆ. ಈ ಅವಧಿಯಲ್ಲಿ ಹೆಚ್ಚು ಸಂತೋಷದಿಂದ ಕಾಣಿಸಿಕೊಳ್ಳುತ್ತೀರಿ. ಶುಭದಿನ. 01. ಸುಬ್ರಹ್ಮಣ್ಯ ಸ್ವಾಮಿಗೆ ಕ್ಷೀರಾಭಿಷೇಕ ಮಾಡಿರಿ.




ವಾರದ ಆರಂಭದಲ್ಲಿ ವೃತ್ತಿಪರರ ಪ್ರಗತಿಗೆ ಆಯ್ಕೆಗಳು ದೊರೆಯುತ್ತವೆ. ದೊಡ್ಡ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುವ ಆಸೆ ಪೂರೈಸುತ್ತದೆ. ಉನ್ನತ ವಿದ್ಯಾಭ್ಯಾಸಕ್ಕಾಗಿ ಸ್ಥಳಾಂತರ ಆಗುವ ಸಾಧ್ಯತೆ. ಅಲರ್ಜಿ ಸಮಸ್ಯೆ ಇರುವವರು ಎಚ್ಚರಿಕೆಯಿಂದ ಇರಬೇಕು. ಸಂಗಾತಿ ಜೊತೆಗೆ ಸಂತಸದ ಸಮಯ ಕಳೆಯಲಿದ್ದೀರಿ. ವೃತ್ತಿಪರ ಕೆಲಸದಲ್ಲಿ ಗೊಂದಲ ಏರ್ಪಡಲಿದೆ. ಶುಭದಿನ 29. ರಾಘವೇಂದ್ರ ಸ್ವಾಮಿಗಳ ಆರಾಧನೆ ಮಾಡಿರಿ.




ಕಲೆಗೆ ಸಂಬಂಧಪಟ್ಟ ಕ್ಷೇತ್ರದಲ್ಲಿ ಇರುವವರಿಗೆ ಅನುಕೂಲಕರ. ಹಿರಿಯ ಅಧಿಕಾರಿಗಳ ಸಹಾಯದಿಂದ ನಿಮ್ಮ ಕೌಶಲವನ್ನು ಹೆಚ್ಚಿಸಿಕೊಳ್ಳುತ್ತೀರಿ. ವಾರದ ಆರಂಭದಲ್ಲಿ ನಿಮಗೆ ಶುಭ ಸುದ್ದಿ ಇದೆ. ವಿವಿಧ ಮೂಲಗಳಿಂದ ಸಂಪತ್ತು ಸಂಗ್ರಹ ಆಗುತ್ತದೆ. ಭೂಮಿ ವ್ಯವಹಾರದಿಂದ ಲಾಭ ಪಡೆಯಲಿದ್ದೀರಿ. ಜೀವನಶೈಲಿ ವೃದ್ಧಿಸಿಕೊಳ್ಳಲು ನಿರ್ಧರಿಸಲಿದ್ದೀರಿ. ಶುಭದಿನ 02. ಗೋಪೂಜೆ ಮಾಡಿ. ಶಿವಕವಚ ಪಠಿಸಿರಿ.




ವೃತ್ತಿಪರ ಬದುಕಿನಲ್ಲಿ ಲಾಭ ಹಾಗೂ ಮಹತ್ತರವಾದ ಪ್ರಗತಿ ಕಾಣುವ ಯೋಗ ಇದೆ. ಸಂದರ್ಶನದಲ್ಲಿ ಭಾಗವಹಿಸುವವರು ಅನುಕೂಲಕರ ಫಲಿತಾಂಶ ನಿರೀಕ್ಷಿಸಬಹುದು. ಸೇವಾ ವಲಯದಲ್ಲಿ ಕಾರ್ಯನಿರ್ವಹಿಸುವವರಿಗೆ ಪ್ರತಿಭೆಯನ್ನು ಪ್ರದರ್ಶಿಸಲು ಅತ್ಯುತ್ತಮ ಅವಕಾಶಗಳಿವೆ. ವಾರದ ಮಧ್ಯ ಭಾಗದಲ್ಲಿ ಪ್ರಗತಿ ಮತ್ತಷ್ಟು ವೇಗ ಪಡೆದುಕೊಳ್ಳುತ್ತದೆ. ಶುಭದಿನ 30. ದೇವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿರಿ.